ಡಾ; ವೈ.ಎ.ನಾರಾಯಣ ಸ್ವಾಮಿ, ಮಾನ್ಯ ಸರ್ಕಾರಿ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರು ರವರು ಖಾಸಗಿ ಅನುದಾನರಹಿತ ಶಾಲಾ ಶಿಕ್ಷಕರಿಗೆ Teachers Benefit Fund ನಿಂದ ಯಾವುದೇ ನೆರವು ಸಿಗುತ್ತಿಲ್ಲದಿರುವ ಕುರಿತು ಮಾಡಲಾದ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ಉತ್ತರ**

ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯು ಒಂದು ಸ್ವಾಯತ್ತ ಸಂಸ್ಥೆಯಾಗಿದ್ದು, ಸರ್ಕಾರದಿಂದ ಅನುದಾನ ಬಿಡುಗಡೆಯಾಗುವುದಿಲ್ಲ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲಾ ಕಾಲೇಜು ಶಿಕ್ಷಕರಿಗೆ / ಉಪನ್ಯಾಸಕರಿಗೆ ಮಾತ್ರ ನಿಧಿಗಳ ಅಜೀವ ಸದಸ್ಯತ್ವ ಪಡೆದಿದ್ದಲ್ಲಿ, ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

**ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ ಸರ್ಕಾರಿ ಮತ್ತು ಅನುದಾನಿತ ಶಾಲಾ- ಕಾಲೇಜು ಶಿಕ್ಷಕರಿಗೆ ನೀಡುತ್ತಿರುವ ಸೌಲಭ್ಯಗಳು**:

1. ಶಿಕ್ಷಕರ ಮಕ್ಕಳಿಗೆ ಪ್ರತಿಭಾ ವಿದ್ಯಾರ್ಥಿ ವೇತನ.
2. ಶಿಕ್ಷಕರುಗಳಿಗೆ ಜಿಲ್ಲಾ / ರಾಜ್ಯ ಮಟ್ಟದ ಪ್ರಶಸ್ತಿಗಳು.
3. ಶಿಕ್ಷಕರುಗಳಿಗೆ ಸಾಹಿತ್ಯ ಮತ್ತು ಸಾಂಸ್ಕೃತಿಕ ಚಟುವಟಿಕೆ ಸ್ಪರ್ಧೆಗಳು (ತಾಲ್ಲೂಕು / ಜಿಲ್ಲಾ / ರಾಜ್ಯ ಮಟ್ಟ).
4. ಶಿಕ್ಷಕರುಗಳಿಗೆ ಅಪಘಾತ ಮತ್ತು ಮರಣ ಪರಿಹಾರ ಸೌಲಭ್ಯ.
5. ಶಿಕ್ಷಕರು ಹಾಗೂ ಅವರ ಅವಲಂಬಿತರಿಗೆ ವೈದ್ಯಕೀಯ ಧನ ಸಹಾಯ (ನಿವೃತ್ತ ಶಿಕ್ಷಕರೂ ಸೇರಿ)
6. ಶಿಕ್ಷಕರ ಮಕ್ಕಳ ಉನ್ನತ ವ್ಯಾಸಂಗಕ್ಕೆ ಧನ ಸಹಾಯ (ನಿವೃತ್ತ ಶಿಕ್ಷಕರಿಗೂ ಅನ್ವಯಿಸುತ್ತದೆ).
7. ಸೇವೆಯಲ್ಲಿರುವಾಗ / ನಿವೃತ್ತಿಯ ನಂತರ ಮೃತರಾದ ಶಿಕ್ಷಕರ ಅವಲಂಬಿತರಿಗೆ ಕುಟುಂಬ ನಿರ್ವಹಣೆಗಾಗಿ ಧನಸಹಾಯ.
8. ಲ್ಯಾಪ್ ಟಾಪ್ / ಟ್ಯಾಬ್ ಖರೀದಿಗಾಗಿ ಶಿಕ್ಷಕರಿಗೆ ಬಡ್ಡಿ ರಹಿತ ಧನಸಹಾಯ.
9. ತಾಲ್ಲೂಕು ಮಟ್ಟದಿಂದ ಜಿಲ್ಲಾ ಮಟ್ಟದವರಿಗೆ ಶಿಕ್ಷಕರ ದಿನಾಚರಣೆಯನ್ನು ಆಚರಿಸಲು ಧನಸಹಾಯ.
10. ವೈದ್ಯಕೀಯ / ಇಂಜಿನಿಯರಿಂಗ್ ಕೋರ್ಸ್ ವ್ಯಾಸಂಗ ಮಾಡುತ್ತಿರುವ ಶಿಕ್ಷಕರ ಮಕ್ಕಳ ಬ್ಯಾಂಕ್‌ನ ಶೈಕ್ಷಣಿಕ ಸಾಲದ ಬಡ್ಡಿ ಹಣ ಮರುಪಾವತಿ.
11. ಹೊರ ಊರಿನಿಂದ ಬಂದ ಶಿಕ್ಷಕರಿಗೆ 'ಶಿಕ್ಷಕರ ಸದನ; ದಲ್ಲಿ ಕಡಿಮೆ ವೆಚ್ಚದಲ್ಲಿ ಉಳಿದುಕೊಳ್ಳಲು ವಸತಿ ವ್ಯವಸ್ಥೆ.
12. ಗುರುಭವನ ನಿರ್ಮಾಣಕ್ಕಾಗಿ ಧನಸಹಾಯ.

**ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿಯ ವತಿಯಿಂದ ರಾಜ್ಯದ ಸರ್ಕಾರಿ / ಅನುದಾನ / ಅನುದಾನರಹಿತ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯಗಳು:**

1. ಸಾಹಸಿ ವಿದ್ಯಾರ್ಥಿಗಳಿಗೆ ಶೌರ್ಯ ಪ್ರಶಸ್ತಿಗಳು.
2. ರಾಜ್ಯ ಮಟ್ಟದ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ.
3. ವಿದ್ಯಾರ್ಥಿಗಳಿಗೆ ವೈದ್ಯಕೀಯ ಧನಸಹಾಯ.
4. ವಿದ್ಯಾರ್ಥಿಗಳಿಗೆ ಅಪಘಾತ ಮತ್ತು ಮರಣ ಪರಿಹಾರ ಯೋಜನೆ.
5. 100 ಫಲಿತಾಂಶ ಪಡೆದ ಶಾಲಾ ಕಾಲೇಜುಗಳಿಗೆ ಪ್ರಶಸ್ತಿ ಪತ್ರ, ಸನ್ಮಾನ ಮತ್ತು ನಗದು ಪುರಸ್ಕಾರ.
6. ಎಸ್.ಎಸ್.ಎಲ್.ಸಿ / ದ್ವಿತೀಯ ಪಿ.ಯು.ಸಿ ಪರೀಕ್ಷೆಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ನಗದು ಪ್ರಶಸ್ತಿಗಳು.
7. ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಸಹ-ಪಠ್ಯ ಚಟುವಟಿಕೆಗಳಿಗೆ ಧನಸಹಾಯ.
8. ಎನ್.ಟಿ.ಎಸ್.ಇ ವಿದ್ಯಾರ್ಥಿ ವೇತನ.
9. ಶಾಲಾ / ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನಸಹಾಯ.
10. ವೃತ್ತಿಪರ ಕೋರ್ಸ್‌ನ ವಿದ್ಯಾರ್ಥಿಗಳಿಗೆ ಶಿಷ್ಯವೇತನ.
11. ರಾಜ್ಯಮಟ್ಟದ ಸ್ಪರ್ಧಾತ್ಮಕ NMMS ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಧನಸಹಾಯ
12. ಕ್ಲಸ್ಟರ್ ಹಂತದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಧನಸಹಾಯ.

ಖಾಸಗಿ ಅನುದಾನರಹಿತ ಶಾಲಾ- ಕಾಲೇಜು ಶಿಕ್ಷಕರಿಗೆ / ಉಪನ್ಯಾಸಕರುಗಳಿಗೆ ಅಜೀವ ಸದಸ್ಯತ್ವ ನೀಡುವ ವಿಷಯದ ಕುರಿತು ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ದಿನಾಂಕ : 08.11.2021 ರಂದು ನಡೆದ ರಾಜ್ಯ ಸಮಿತಿ ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

**ಇಪಿ 128 ಪಿಜಿಸಿ 2022**

**(ಬಿ.ಸಿ. ನಾಗೇಶ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು